ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 318
2. ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 14.09.2021
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಸರ್ಕಾರಿ ಸ್ವಾಮ್ಯದ ಮೈಸೂರು ಸಕ್ಕರೆ ಕಂಪನಿಯಲ್ಲಿ ಕಬ್ಬು ಅರೆಯುವಿಕೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ಬಂದಿದ್ದಲ್ಲಿ ಕಾರ್ಖಾನೆಯ ಕಾರ್ಯಸ್ಥಗಿತಗೊಂಡಿದ್ದು ಯಾವಾಗ;	ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ ಮೊದಲಿಗೆ 2015-16 ಮತ್ತು 2016-17ನೇ ಹಂಗಾಮಿನಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಲಾಗಿತ್ತು. 2017-18 ಮತ್ತು 2018-19ನೇ ಸಾಲಿನಲ್ಲಿ ಕಬ್ಬು ಅರೆಯುವ ಕಾರ್ಯವನ್ನು ನಿರ್ವಹಿಸಲಾಗಿದೆ. ಮುಂದುವರಿದು, ದುಡಿಯುವ ಬಂಡವಾಳದ ಕೊರತೆಯಿಂದಾಗಿ 2019-20ನೇ ಹಂಗಾಮಿನಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಲಾಗಿದೆ.
(ಇ)	ಇದರಿಂದಾಗಿ ಆ ಭಾಗದ ಕಬ್ಬು ಬೆಳೆಗಾರರು ಮತ್ತು ಕಾರ್ಮಿಕರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ ಕಬ್ಬು ನುರಿಸುವಿಕೆಯನ್ನು ಸ್ಥಗಿತಗೊಳಿಸಿದ್ದ ಹಂಗಾಮುಗಳಲ್ಲಿ ರೈತರ ಹಿತಾಸಕ್ತಿಯನ್ನು ಕಾಪಾಡುವ ದೃಷ್ಟಿಯಿಂದ ಈ ಕಾರ್ಖಾನೆಯ ಕಬ್ಬು ಮೀಸಲು ಕ್ಷೇತ್ರದಲ್ಲಿ ಬೆಳೆದ ಕಬ್ಬನ್ನು ನೆರೆಯ ಸಕ್ಕರೆ ಕಾರ್ಖಾನೆಗಳಿಗೆ ಮತ್ತು ನೆರೆ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಸರಬರಾಜು ಮಾಡಲಾಗಿದೆ. ಕಬ್ಬು ನುರಿಸುವಿಕೆ ಸ್ಥಗಿತಗೊಳಿಸಿದ್ದ ಹಿನ್ನೆಲೆಯಲ್ಲಿ, ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಟ್ಟು 285 ಖಾಯಂ ಕಾರ್ಮಿಕರ ಪೈಕಿ ಒಟ್ಟು 208 ಕಾರ್ಮಿಕರು ಸ್ವಯಂ ನಿವೃತ್ತಿಯನ್ನು ಪಡೆಯಲು ಅವರ ಇಚ್ಛೆಯನ್ನು ವ್ಯಕ್ತಪಡಿಸಿದ್ದರಿಂದ, ಕಾರ್ಮಿಕರ ಹಿತಾಸಕ್ತಿಯನ್ನು ಪರಿಗಣಿಸಿ, ಒಟ್ಟು 208 ಕಾರ್ಮಿಕರಿಗೆ ಸ್ವಯಂ ನಿವೃತ್ತಿ ಯೋಜನೆಯನ್ನು ಜಾರಿಗೊಳಿಸುವುದಕ್ಕಾಗಿ ಸರ್ಕಾರದ ಆದೇಶ ಸಂಖ್ಯೆ: ಸಿಐ 05 ಸಿಓಎಫ್ 2020 ದಿನಾಂಕ: 15.06.2020ರಲ್ಲಿ ರೂ.21.80 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ. ಪ್ರಸ್ತುತ 222 ಕಾರ್ಮಿಕರಿಗೆ ಸ್ವಯಂ ನಿವೃತ್ತಿಯನ್ನು ಮಂಜೂರು ಮಾಡಲಾಗಿದ್ದು, ಇದರಲ್ಲಿ 63 ಕಾರ್ಮಿಕರಿಗೆ ಗ್ರಾಚ್ಯುಯಿಟಿಯನ್ನು ಬಿಡುಗಡೆಗೊಳಿಸುವುದು ಬಾಕಿ ಇದ್ದು, ಉಳಿದ 39 ಕಾರ್ಮಿಕರು ಮೈಸೂರು ಸಕ್ಕರೆ ಕಂಪನಿಯ ಸೇವೆಯಲ್ಲಿ ಇರುತ್ತಾರೆ.
(ಈ)	ಕಬ್ಬು ಅರೆಯುವಿಕೆ ಸ್ಥಗಿತಗೊಳ್ಳಲು ಕಾರಣಗಳೇನು; (ಪೂರ್ಣ ವಿವರ ನೀಡುವುದು)	ಮೈಸೂರು ಸಕ್ಕರೆ ಕಂಪನಿಯು 2005ರಲ್ಲಿ ಬಿ.ಐ.ಎಫ್.ಆರ್.ನಿಂದ ರೋಗಗ್ರಸ್ಥ ಕಾರ್ಖಾನೆಯೆಂದು ಘೋಷಿಸಲ್ಪಟ್ಟಿರುತ್ತದೆ. ಸದರಿ ಕಾರ್ಖಾನೆಯು 2013-14ರ ಅಂತ್ಯಕ್ಕೆ ರೂ.463.39 ಕೋಟಿಗಳಷ್ಟು ಕ್ರೋಢೀಕೃತ ನಷ್ಟವನ್ನು ಅನುಭವಿಸಿದ್ದ ಕಾರಣದಿಂದಾಗಿ, 2015-16, 2016-17 ಮತ್ತು 2019-20ನೇ ಹಂಗಾಮಿನಿಂದ ದುಡಿಯುವ ಬಂಡವಾಳದ ಕೊರತೆಯುಂಟಾಗಿ, ಕಬ್ಬು ನುರಿಸುವ ಕಾರ್ಯವನ್ನು ಸ್ಥಗಿತಗೊಳಿಸಿರುತ್ತದೆ. ಅಲ್ಲದೇ, ಪ್ರಸ್ತುತ ಒಟ್ಟು ರೂ.136.01 ಕೋಟಿಗಳಷ್ಟು ಸಾಲ ಮತ್ತು ಜವಾಬ್ದಾರಿಗಳನ್ನು ಹೊಂದಿರುತ್ತದೆ.

........2

(ಉ)	ಸರ್ಕಾರಿ ಸ್ವಾಮ್ಯದಡಿ ಯಾವ ಕಾಲಮಿತಿಯಲ್ಲಿ ಸದರಿ ಕಾರ್ಖಾನೆಯಲ್ಲಿ ಕಬ್ಬು ಅರೆಯುವಿಕೆಯನ್ನು ಪ್ರಾರಂಭಿಸಲಾಗುವುದು?	ಮೈಸೂರು ಸಕ್ಕರೆ ಕಾರ್ಖಾನೆಯನ್ನು LROT(Lease Rehabilitate Operate Transfer) ಆಧಾರದ ಮೇಲೆ 2021-22ನೇ ಹಂಗಾಮಿನಿಂದ 40 ವರ್ಷಗಳ ಅವಧಿಗೆ ಖಾಸಗಿಯವರಿಗೆ ಗುತ್ತಿಗೆ ನೀಡಲು ಸರ್ಕಾರದ ಆದೇಶ ಸಂಖ್ಯೆ: ಸಿಐ 05 ಸಿಓಎಫ್ 2020, ದಿನಾಂಕ:18.11.2020 ರಲ್ಲಿ ಸರ್ಕಾರದ ಅನುಮತಿ ನೀಡಲಾಗಿರುತ್ತದೆ ಮತ್ತು ಟೆಂಡರ್ ಪ್ರಕ್ರಿಯೆಯಲ್ಲಿ ಯಶಸ್ವಿಯಾಗುವ ಗುತ್ತಿಗೆದಾರರು 2021-22ನೇ ಹಂಗಾಮಿನಿಂದ ಕಬ್ಬು ನುರಿಸುವ ಕಾರ್ಯವನ್ನು ಪ್ರಾರಂಭಿಸತಕ್ಕದೆಂದು ಷರತ್ತು ವಿಧಿಸಲು ನಿರ್ಧರಿಸಲಾಗಿತ್ತು. ಆದರೆ, ಮೈಸೂರು ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದ ಮೇರೆಗೆ ನೀಡುವ ಪ್ರಸ್ತಾವನೆಗೆ ಕಾರ್ಖಾನೆಯ ವ್ಯಾಪ್ತಿಯಲ್ಲಿ ಕಬ್ಬು ಬೆಳೆಯುವ ರೈತರು, ಕಂಪನಿಯ ಷೇರುದಾರರು, ಜನಪ್ರತಿನಿಧಿಗಳು ಮತ್ತು ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿ ಕಾರ್ಖಾನೆಯನ್ನು ಓ ಅಂಡ್ ಎಂ ಆಧಾರದ ಮೇಲೆ ನಡೆಸಲು ಮನವಿಗಳನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ, ಮೈಸೂರು ಸಕ್ಕರೆ ಕಾರ್ಖಾನೆಯನ್ನು LROT(Lease Rehabilitate Operate Transfer) ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡುವುದರ ಮೂಲಕ ಅಥವಾ O & M (Operation and Maintenance) ಆಧಾರದ ಮೇಲೆ ಪುನಶ್ಚೇತನಗೊಳಿಸುವ ಕುರಿತು ಪುನರ್ ಪರಿಶೀಲಿಸಲಾಗುತ್ತಿದೆ. ಈ ಬಗ್ಗೆ ಸೂಕ್ತ ಕ್ರಮ ಕೈಗೊಂಡ ನಂತರ ಮೈಸೂರು ಸಕ್ಕರೆ ಕಾರ್ಖಾನೆಯಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸಲು ಕ್ರಮವಹಿಸಲಾಗುವುದು.

ಸಂಖ್ಯೆ: ಸಿಐ 258 ಸಿಓಎಫ್ 2021

(ಶಂಕರ್.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು.